ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್-04/2025(ಆರ್.ಪಿ.ಸಿ) ದಿನಾಂಕ: 31-10-2025
ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್-05/2025(ಕಲ್ಯಾಣ ಕರ್ನಾಟಕ) ದಿನಾಂಕ: 31-10-2025

# ಪ್ರಕಟಣೆ

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲು ಪ್ರಾಧಿಕಾರವು ದಿನಾಂಕ 31.10.2025 ರಂದು ಅಧಿಸೂಚನೆ ಹೊರಡಿಸಲಾಗಿದೆ.

ಕರ್ನಾಟಕದ ವಿವಿಧ ಸರ್ಕಾರಿ ಇಲಾಖೆ/ಸಂಸ್ಥೆ/ನಿಗಮದಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಅರ್ಜಿಗಳನ್ನು ಆಹ್ವಾನಿಸಿ ದಿನಾಂಕ 08.10.2025 ರಂದು ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಪ್ರತ್ಯೇಕವಾಗಿ ಅಧಿಸೂಚನೆಗಳನ್ನು ಹೊರಡಿಸಲಾಗಿತ್ತು. ಸದರಿ ಅಧಿಸೂಚನೆಯಲ್ಲಿ ದಿನಾಂಕ 08.10.2025 ರಿಂದ 31.10.2025 ರವರೆಗೆ ಅರ್ಜಿ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಿರುವುದರಿಂದ ಮತ್ತು ಈಗಾಗಲೇ ಅಧಿಸೂಚನೆ ಹೊರಡಿಸಿದ ಇಲಾಖೆ/ಸಂಸ್ಥೆಗಳ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಈ ಕೆಳಗಿನಂತೆ ನಿಗದಿಗೊಳಿಸಲಾಗಿದೆ.

1) ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆಗೆ ಕೊನೆಯ ದಿನಾಂಕ : 14.11.2025
2) ಆನ್‌ಲೈನ್ ಮೂಲಕ ಶುಲ್ಕ ಪಾವತಿಸಲು ಕೊನೆಯ ದಿನಾಂಕ : 15.11.2025

**ಸೂಚನೆ:** ಅರ್ಹತಾ ನಿಬಂಧನೆಗಳು ಹಾಗೂ ಇತರೆ ವಿವರಗಳಿಗಾಗಿ ದಿನಾಂಕ: 08.10.2025 ಹಾಗೂ ದಿನಾಂಕ 31.10.2025ರ ವಿವರವಾದ ಅಧಿಸೂಚನೆಯನ್ನು ಓದಿಕೊಳ್ಳಲು ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in